## ದ್ವಿತೀಯ ಪಿ.ಯು.ಸಿ – ಮಾದರಿ ಪ್ರಶ್ನೆಪತ್ರಿಕೆ (1) ಜನವರಿ – 2020

**ಸಮಯ : 3.15 ಗಂಟೆ** **ವಿಷಯ:– ಕನ್ನಡ** **ಅಂಕಗಳು–100**

---

### ಅ–ವಿಭಾಗ

**I.ಅ. ಕೆಳಗಿನ ಪ್ರಶ್ನೆಗಳಿಗೆ ಒಂದೊಂದು ವಾಕ್ಯದಲ್ಲಿ ಉತ್ತರಿಸಿ :** **10x1=10**

1. ರಾವಣನ ಆಗಮನವನ್ನು ಸೀತೆಗೆ ತೋರಿದವರು ಯಾರು?
2. ಯಾವ ಮಾತಿಗೆ ಕೊನೆಯಿಲ್ಲವೆಂದು ಪುರಂದರದಾಸರು ಹೇಳಿದ್ದಾರೆ?
3. ಮುದುಕಿಯು ಏನೆಂದು ಹರಕೆ ಹೊತ್ತಳು?
4. ಜನರಿಗೆ ಯಾವುದಕ್ಕೆ ಗತಿಯಿಲ್ಲ?
5. ಸ್ಥಳೀಯ ಭಾಷೆ ಕಲಿಯದ ಅನ್ಯಭಾಷಿಕರು ಏನಾಗುತ್ತಾರೆ?
6. ಬೆಳ್ಳಿಲೋಟ ಲಪಾಟಾಯಿಸಿದ ಅಪವಾದವನ್ನು ಯಾರ ಮೇಲೆ ಹೊರಸಲಾಯಿತು?
7. ಕತೆಯನ್ನು ಯಾವ ರಸಗಳಲ್ಲಿ ಹೇಳಲೆಂದು ಮುದ್ದಣ ಕೇಳಿದನು?
8. ನಿರೂಪಕರ ಕೊಡಲಿಯ ಆಕಾರ ಹೇಗಿತ್ತು?
9. ರಮೇಶ್ ಬಾಬು ಯಾರು?
10. ನಾಗರಾಜ ಕೋವಿ ಹಿಡಿದು ಎಲ್ಲಿ ಕೂತಿದ್ದ?

### ಆ–ವಿಭಾಗ

**II. ಕೆಳಗಿನ ನಾಲ್ಕು ಪ್ರಶ್ನೆಗಳಿಗೆ ಎರಡು ಮೂರು ವಾಕ್ಯದಲ್ಲಿ ಉತ್ತರಿಸಿ :** **4x2=8**

11. ಹೆಂಡತಿಯ ಹರಿಬಕ್ಕಾಗಿ ಗಂಡುಗೂಸು ಏನು ಮಾಡುತ್ತಾನೆ?
12. ಶುಚಿ ಮತ್ತು ಸ್ವಾದಗಳನ್ನು ಕುರಿತು ಸೋಮನಾಥನ ಅಭಿಪ್ರಾಯಗಳೇನು?
13. ತಂದೆ ಮಗುವಿಗೆ ಕಾಣಿಸಿಕೊಳ್ಳುವ ಬಗೆ ಹೇಗೆ?
14. ಮುದುಕ ಏನೆಂದು ಗೋಗರೆಯುತ್ತಾನೆ?
15. ಆತ್ಮಕ್ಕೆ ಕುಮಟು ಹತ್ತುವುದು ಎಂದರೇನು?

**ಆ. ಕೆಳಗಿನ ಮೂರು ಪ್ರಶ್ನೆಗಳಿಗೆ ಎರಡು ಮೂರು ವಾಕ್ಯದಲ್ಲಿ ಉತ್ತರಿಸಿ :** **3x2=6**

16. ಡಾ॥ ಚಂದ್ರಪ್ಪ ಬಸಲಿಂಗನಿಗೆ ಡಾ॥ ತಿಮ್ಮಪ್ಪನ ಬಗ್ಗೆ ಕೊಟ್ಟ ಅಭಿಪ್ರಾಯವೇನು?
17. ತಾನು ಅದೃಷ್ಟವಂತೆಯೆಂದು ಲೇಖಕಿ ಭಾವಿಸಲು ಕಾರಣವೇನು?
18. ಕಲಾಂ ಅವರು ತಾವು ಏತಕ್ಕಾಗಿ ಆತ್ಮಕಥೆ ಬರೆದೆ ಎಂದು ಹೇಳುತ್ತಾರೆ?
19. ಮನೋರಮೆ ಕತೆ ಹೇಳೆಂದು ಕೇಳಲು ಕಾರಣವೇನು?

**ಇ. ಕೆಳಗಿನ ಮೂರು ಪ್ರಶ್ನೆಗಳಿಗೆ ಎರಡು ಮೂರು ವಾಕ್ಯದಲ್ಲಿ ಉತ್ತರಿಸಿ :** **3x2=6**

20. ಕೃಷ್ಣೇಗೌಡರ ಆನೆ ಹುಟ್ಟಿ ಬೆಳೆದ ಬಗೆ ಹೇಗೆ?
21. ಕಾಡಾನೆಗಳ ಹಾವಳಿಗೆ ಪ್ರಕಾಶ್ ನೀಡಿದ ಕಾರಣಗಳೇನು?
22. ನಾಗರಾಜ ದುರ್ಗಪ್ಪನ ಮೇಲೆ ಏನೆಂದು ರೇಗಿದನು?
23. ಹುಚ್ಚು ನಾಯಿಗಳು ಆಸ್ಪತ್ರೆಯಲ್ಲಿ ಹೇಗೆ ವರ್ತಿಸುತ್ತವೆಂದು ಪುಟ್ಟಯ್ಯ ಹೇಳಿದನು?

### ಇ–ವಿಭಾಗ

**III ಅ. ಕೆಳಗಿನ ಯಾವುದಾದರೂ ಎರಡು ವಾಕ್ಯಗಳನ್ನು ಕುರಿತು ಸಂದರ್ಭ ಸೂಚಿಸಿ ಸ್ವಾರಸ್ಯ ಬರೆಯಿರಿ:** **2x3=6**

24. ಪುಷ್ಪವಿಲ್ಲದೆ ಪರಿಮಳವರಿಯಬಹುದೆ
25. ಮುಳುಗಿರಲಿ ಮುಪ್ಪು ಚಿಂತನದಿ
26. ಮನ್ನಿಸಲಿ ನಿಮ್ಮನ್ನು ಆ ದೇವರೆ!

**ಆ. ಕೆಳಗಿನ ಯಾವುದಾದರೂ ಒಂದು ವಾಕ್ಯವನ್ನು ಕುರಿತು ಸಂದರ್ಭ ಸೂಚಿಸಿ ಸ್ವಾರಸ್ಯ ಬರೆಯಿರಿ:** **1x3=3**

27. ಹಾಡುವುದು ಅವುಗಳಿಗೆ ಅನಿವಾರ್ಯ; ಅವುಗಳ ಕರ್ಮ!
28. ಕನ್ನಡಂ ಕತ್ತುರಿಯಲ್ತೆ.

**ಇ. ಕೆಳಗಿನ ಯಾವುದಾದರೂ ಒಂದು ವಾಕ್ಯವನ್ನು ಕುರಿತು ಸಂದರ್ಭ ಸೂಚಿಸಿ ಸ್ವಾರಸ್ಯ ಬರೆಯಿರಿ:** **1x3=3**

29. ಹೊರಗಡೆಯಿಂದ ಎಕ್ಸ್‌ಪೋರ್ಟ್ ಆದವು.
30. ಆನೆ ಬೇಲಿ ದಾಟಿ ಹೋಯ್ತು ಸಾರ್

ಈ–ವಿಭಾಗ

**IV ಅ. ಕೆಳಗಿನ ಮೂರು ಪ್ರಶ್ನೆಗಳಿಗೆ ಐದಾರು ವಾಕ್ಯಗಳಲ್ಲಿ ಉತ್ತರಿಸಿ :** **3x4=12**

31. ರಾವಣನ ಮನಃಪರಿವರ್ತನೆಯ ಸಂದರ್ಭವನ್ನು ಕವಿ ಹೇಗೆ ಚಿತ್ರಿಸಿದ್ದಾನೆ? ವಿವರಿಸಿ.
32. ಉರಿಲಿಂಗಪೆದ್ದಿಯ ವಚನಗಳಲ್ಲಿನ ಆಶಯವೇನು?
33. ಮಾನವ ಜೀವನದ ಸಾರ್ಥಕತೆ ಎಲ್ಲಿದೆಯೆಂದು ಕವಿ ಬೇಂದ್ರೆ ಹೇಳಿದ್ದಾರೆ?
34. ಹತ್ತಿಯ ಬೀಜದ ಮತ್ತು ಮಾನವ ಜೀವನದ ಪಯಣವನ್ನು ಕವಿ ಹೇಗೆ ಸಮೀಕರಿಸಿದ್ದಾರೆ?

**ಆ. ಕೆಳಗಿನ ಎರಡು ಪ್ರಶ್ನೆಗಳಿಗೆ ಐದಾರು ವಾಕ್ಯಗಳಲ್ಲಿ ಉತ್ತರಿಸಿ :** **2x4=8**

35. ಕನ್ನಡಿಗರೆನ್ನಿಸಿಕೊಳ್ಳಲು ಯಾವ ಯೋಗ್ಯತೆಯ ಪ್ರಶ್ನೆಗಳು ನಮ್ಮನ್ನು ಚುಚ್ಚಬೇಕು? ವಿವರಿಸಿ.
36. ಬೆಳ್ಳಿಲೋಟ ಕಂಡಾಗ ಧಣಿಯಲ್ಲಿ ಆತಂಕ, ಗಾಬರಿ, ಭಯ ಉಂಟಾಗಲು ಕಾರಣವೇನು?
37. ಹಳ್ಳಿಯ ಹೋಟೆಲುಗಳಲ್ಲಿ ಬಂದ ನವೀನತೆಯ ಕುರಿತು ಬರೆಯಿರಿ.

**ಇ. ಕೆಳಗಿನ ಎರಡು ಪ್ರಶ್ನೆಗಳಿಗೆ ಐದಾರು ವಾಕ್ಯಗಳಲ್ಲಿ ಉತ್ತರಿಸಿ :** **2x4=8**

38. ಎಲ್ಲರ ನಿರೀಕ್ಷೆ ಸುಳ್ಳಾಗುವಂತೆ ಕೃಷ್ಣೇಗೌಡ ಆನೆಯನ್ನು ಹೇಗೆ ಸಾಕಿದ.?
39. ಪುಟ್ಟಯ್ಯ ತನ್ನ ಅಸಹಾಯಕತೆಯನ್ನು ಹೇಗೆ ವಿವರಿಸಿದ್ದಾನೆ?
40. ಆನೆಯು ಇಲ್ಲಿ ಬಾಯಿಲ್ಲದ ಜನರ ಸಂಕೇತವಾಗಿರುವುದನ್ನು ವಿಶ್ಲೇಷಿಸಿ.

ಉ–ವಿಭಾಗ

**V ಅ. ಈ ಕೆಳಗಿನ ಯಾವುದಾದರೂ ಒಂದು ಪದ್ಯಕ್ಕೆ ಭಾವಾರ್ಥ ಬರೆಯಿರಿ:** **1x5=5**

41. ಇವರಂ ಪ್ರಾಣಪ್ರಿಯರಂ
ನೆವಮಿಲ್ಲದೆ ಕರ್ಮವಶಮೆ ನೆವಮನೆ ಕಂದ
ರ್ಪವಿಮೋಹದಿಂದಗಲ್ಚಿದೆ
ನವಿವೇಕಿಯೆನೆನ್ನ ಕುಲದ ಪೆಂಪಳಿವಿನೆಗಂ॥

42. ಕ್ಯೂನಿಲ್ಲು ; ಫುಟ್ಪಾತಿನಲ್ಲೇ ಸಂಚರಿಸು;
ರಸ್ತೆದಾಟುವಾಗೆಚ್ಚರಿಕೆ; ಓಡು, ಎಲ್ಲಿಯೂ
ನಿಲ್ಲದಿರು; ಹೇಗೋ ಅವರಿವರ ತಳ್ಳಿ ಮುನ್ನುಗ್ಗು;
ಎಲ್ಲಾದರೂ ಸರಿಯೇ, ಬೇರೂರು, ಹೀರು.

**ಆ. ಭಾಷಾಭ್ಯಾಸ: ಈ ಕೆಳಗಿನ ಆರು ಪ್ರಶ್ನೆಗಳಿಗೆ ಸೂಚನೆಯಂತೆ ಉತ್ತರಿಸಿ :** **6x2=12**

43. ಈ ಪದಗಳ ಅರ್ಥ ಬರೆಯಿರಿ : ಕುಠಾರ, ರನ್ನವಣಿ
44. ಈ ಪದಗಳ ಗುಣವಾಚಕ ಬರೆಯಿರಿ: ಹೆಮ್ಮರ, ದುರ್ದೈವ
45. ಈ ಪದಗಳ ಸಮನಾರ್ಥಕಗಳನ್ನು ಬರೆಯಿರಿ: ಅಶ್ರು, ಮಾಹೆ
46. ಈ ಪದಗಳ ತದ್ಭವ ರೂಪ ಬರೆಯಿರಿ: ಯೋಗಿ, ದೆವಸ
47. ಈ ನುಡಿಗಟ್ಟುಗಳನ್ನು ಸ್ವಂತವಾಕ್ಯದಲ್ಲಿ ಬಳಸಿರಿ: ಮೂಗುತೂರಿಸು, ಹೊಟ್ಟೆಪಾಡು.
48. ಈ ಪದಗಳ ನಿಷೇಧರೂಪ ಬರೆಯಿರಿ: ನಿಲ್ಲು, ತಳ್ಳು
49. ಈ ಪದಗಳ ಕಾಲಸೂಚಕವನ್ನು ತಿಳಿಸಿ ಬ: ಕೇಳುವರು, ತತ್ತರಿಸುತ್ತಾನೆ

**ಇ. ಕೆಳಗಿನ ಯಾವುದಾದರೂ ಒಂದಕ್ಕೆ ಪ್ರಬಂಧ ಬರೆಯಿರಿ:** **1x5=5**

50. ಇಂಟರ್‌ನೆಟ್‌ನಲ್ಲಿ ಕನ್ನಡ ಬಳಕೆ
51. ನಗರ ನೈರ್ಮಲ್ಯ ಕಾಪಾಡುವಲ್ಲಿ ಯುವ ಜನರ ಪಾತ್ರ

**ಈ. ಕೆಳಗಿನ ಯಾವುದಾದರೂ ಒಂದನ್ನು ಕುರಿತು ಪತ್ರಲೇಖನ ಬರೆಯಿರಿ:** **1x4=4**

52. ನೀವು ಕೈಗೊಂಡ ಶೈಕ್ಷಣಿಕ ಪ್ರವಾಸವನ್ನು ವಿವರಿಸುತ್ತಾ ನಿಮ್ಮ ತಾಯಿಗೆ ಪತ್ರ ಬರೆಯಿರಿ.
53. ನಿಮ್ಮ ಬಡಾವಣೆಯಲ್ಲಿ ಕೆಟ್ಟಿರುವ ಬೀದಿ ದೀಪಗಳನ್ನು ಸರಿಪಡಿಸುವಂತೆ ಕೋರಿ ಬೆಂಗಳೂರು ಮಹಾನಗರ ಪಾಲಿಕೆಯ ಆಯುಕ್ತರಿಗೊಂದು ಪತ್ರ ಬರೆಯಿರಿ

**ಉ. ಈ ಕೆಳಗಿನ ಗಾದೆಗಳಲ್ಲಿ ಯಾವುದಾದರೂ ಒಂದನ್ನು ವಿಸ್ತರಿಸಿ.** **1x4=4**

54. ಪ್ರತ್ಯಕ್ಷವಾಗಿ ಕಂಡರೂ ಪ್ರಮಾಣಿಸಿ ನೋಡು.
55. ಕುಂಬಾರನಿಗೆ ವರುಷ ದೊಣ್ಣೆಗೆ ನಿಮಿಷ

*****